Karnataka Veterinary, Animal & Fisheries Sciences University, Bidar
ಕರ್ನಾಟಕ, ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ

ಡೀನ್‌ರವರ ಕಾರ್ಯಾಲಯ
ಪಶುವೈದ್ಯಕೀಯ ಮಹಾವಿದ್ಯಾಲಯ, ಬೀದರ

Office of the Dean
Veterinary College, BIDAR

ಸಂಖ್ಯೆ ಡೀನ್/ಪವೈಮ(ಬೀ)/ಬೊ.ಗು.ನೇ/ಪ್ರಕಟಣೆ/2023-24

ದಿನಾಂಕ 27-11-2023

Veterinary College, BIDAR
Sl. No: 1015 Date: 27/11/23

## ಪ್ರಕಟಣೆ

**ವಿಷಯ:** ಪಶುವೈದ್ಯಕೀಯ ಮಹಾವಿದ್ಯಾಲಯ, ಬೀದರನಲ್ಲಿ ಬೋಧಕ ಸಿಬ್ಬಂದಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡುವ ಕುರಿತು

**ಉಲ್ಲೇಖ:** 1) File No. RGR-EST0GEN/14/2023-ESTD-O/oDR/7789/3677 Dtd: 06-11-2023

2) No.R/Rectt/104th BOM/Dir.RecTeacher.ScoreCard/2022/2697 Dtd 8-9-2022

◇◇◇

ಪ್ರಸ್ತುತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಕುಲಸಚಿವರ ಆದೇಶದಂತೆ ಪಶುವೈದ್ಯಕೀಯ ಮಹಾವಿದ್ಯಾಲಯ, ಬೀದರನಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ಎದುರಾಗಿ ಗುತ್ತಿಗೆ ಆಧಾರದ ಮೇಲೆ ಬೋಧಕ ಸಿಬ್ಬಂದಿಗಳನ್ನು ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಅಹ್ವಾನಿಸಲಾಗಿದೆ. ನೇಮಕಾತಿ ಬಯಸುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಭರ್ತಿಮಾಡಿ **ದಿನಾಂಕ 11-12-2023 ರಂದು ಬೆಳಗ್ಗೆ 10.00 ಗಂಟೆಗೆ** ನಡೆಯಲ್ಲಿರುವ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

| ಕ್ರಮ ಸಂಖ್ಯೆ | ಹುದ್ದೆಯ ಹೆಸರು | ವಿಭಾಗದ ಹೆಸರು | ಹುದ್ದೆಗಳ ಸಂಖ್ಯೆ |
|---|---|---|---|
| 1 | ಸಹಾಯಕ ಪ್ರಾಧ್ಯಾಪಕರು<br>Assistant Professor | ಪಶುವೈದ್ಯಕೀಯ ಅಂಗರಚನಾಶಾಸ್ತ್ರ<br>Veterinary Anatomy | 01 |
| 2 | ಸಹಾಯಕ ಪ್ರಾಧ್ಯಾಪಕರು<br>Assistant Professor | ಪಶುವೈದ್ಯಕೀಯ ರೋಗಶಾಸ್ತ್ರ<br>Veterinary Pathology | 01 |

**ವಿದ್ಯಾರ್ಹತೆ:**

- ಸಂಬಂಧಪಟ್ಟ ವಿಷಯದಲ್ಲಿ ಭಾರತೀಯ ಪಶುವೈದ್ಯಕೀಯ ಪರಿಷತ್ತಿನಿಂದ ಮಾನ್ಯತೆ ಹೊಂದಿರುವ ಮಹಾವಿದ್ಯಾಲಯಗಳಿಂದ ಪಶುವೈದ್ಯಕೀಯ ಅಥವಾ ಭಾರತೀಯ ಕೃಷಿ ಅನುಸಾಂಧ ಪರಿಷತ್ತಿನ ಅಡಿಯಲ್ಲಿ ಬರುವ Deemed Institutions ಗಳಿಂದ BVSc&AH ಪದವಿ ಪಡೆದಿರಬೇಕು
- ಸಂಬಂಧಪಟ್ಟ ವಿಷಯದಲ್ಲಿ ಎಂವ್ಹಿಎಸ್‌ಸಿ (MVSc) ಅಥವಾ ಪಿಎಚ್‌ಡಿ (Ph.D) ಪಡೆದಿರಬೇಕು
- ರಾಷ್ಟ್ರೀಯ ಅರ್ಹತಾ ಪರೀಕ್ಷೆಯಲ್ಲಿ (NET) ಉತ್ತೀರ್ಣರಾದವರಿಗೆ ಮೊದಲ ಆದ್ಯತೆ ನೀಡಲಾಗುವುದು.

**ಷರತ್ತು ಮತ್ತು ನಿಬಂಧನೆಗಳು:**

- ಪಿಎಚ್‌ಡಿ ಪದವಿ/ರಾಷ್ಟ್ರೀಯ ಅರ್ಹತಾ ಪರೀಕ್ಷೆ (NET) ಉತ್ತೀರ್ಣರಾಗಿ ಪ್ರಮಾಣಪತ್ರ ಹೊಂದಿರುವ ಅಭ್ಯರ್ಥಿಗಳಿಗೆ ಮಾಸಿಕ ರೂ. 56,700/- ಸಂಭಾವನೆ ನೀಡಲಾಗುವುದು ಹಾಗೂ ಪಿಎಚ್‌ಡಿ ಪದವಿ/ರಾಷ್ಟ್ರೀಯ ಅರ್ಹತಾ ಪರೀಕ್ಷೆ (NET) ಪ್ರಮಾಣ ಪತ್ರ ಹೊಂದಿರದ ಅಭ್ಯರ್ಥಿಗಳಿಗೆ ಮಾಸಿಕ **ರೂ. 50,000/-** ವೇತನ ಪಾವತಿಸಲಾಗುವುದು
- ಉಲ್ಲೇಖ (2) ರ ವಿಶ್ವವಿದ್ಯಾಲಯದ ಅಧಿಸೂಚನೆಯಂತೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಬಂದು ಸಂದರ್ಶನಕ್ಕೆ ಹಾಜರಾಗಬೇಕು
- ಅಭ್ಯರ್ಥಿಗಳು ಯಾವುದೇ ಸಂಧರ್ಭದಲ್ಲಿ ಅರ್ಜಿಗಳನ್ನು ಮುಂಚಿತವಾಗಿ ಅಥವಾ ಮಿಂಚಂಚೆ ಮೂಲಕ ಕಳುಹಿಸುವಂತಿಲ್ಲ
- ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಪ್ರಸ್ತುತ ಖಾಲಿ ಇರುವ ಹುದ್ದೆಗಳ ಎದುರಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿಯಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಖಾಯಮಾತಿ, ಹಿರಿತನ, ಸಕ್ರಮಾತಿ, ಪಿ.ಎಫ್/ಇ.ಎಸ್.ಐ ಮತ್ತು ಇತರೆ ಯಾವುದೇ ತರಹದ ಸೌಲಭ್ಯ ಅಥವಾ ಹಕ್ಕಿಗೆ ಒಳಪಟ್ಟಿರುವುದಿಲ್ಲ.
- ಸದರಿ ಅಧಿಸೂಚನೆಯು ತಾತ್ಕಾಲಿಕ ನೇಮಕಾತಿಯಾಗಿದ್ದು, ಯಾವುದೇ ಸಮಯದಲ್ಲಿ ಯಾವುದೇ ಮಾಹಿತಿ ನೀಡದೆ ಕೆಲಸದಿಂದ ಬಿಡುಗಡೆ ಮಾಡಲಾಗುವುದು ಅಥವಾ ಅವಧಿಯ ಮುಂಚಿತವಾಗಿ ಆದೇಶ ರದ್ದು ಪಡಿಸಲಾಗುವುದು
- ಪ್ರಸ್ತುತ ಸಹಾಯಕ ಪ್ರಾಧ್ಯಾಪಕ ಹುದ್ದೆಗಳು 179 ದಿನಗಳ ಅವಧಿಗೆ ಮಾತ್ರ ಅಥವಾ ಖಾಯಂ ಭರ್ತಿ ಆಗುವವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅಸ್ತಿತ್ವದಲ್ಲಿರುತ್ತದೆ.
- ಕಲ್ಯಾಣ ಕರ್ನಾಟಕ ಅಥವಾ ಕರ್ನಾಟಕದ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆ ನೀಡಲಾಗುವುದು

ಡೀನ್(ಪವೈ).
ಪಶುವೈದ್ಯಕೀಯ ಮಹಾವಿದ್ಯಾಲಯ
ನಂದಿನಗರ, ಬೀದರ

ಡೀನ್(ಪವೈ)
ಪಶುವೈದ್ಯಕೀಯ ಮಹಾವಿದ್ಯಾಲಯ
ನಂದಿನಗರ, ಅ.ಪೆ.ಸಂಖ್ಯೆ 6, ಬೀದರ